ಮೈಸೂರ ಗೆಜಿಟ್.

ಸಂ. 42.] ಸರ್ಕಾರದಿಂದ ಪಾಯಿಷ್ ಆದ್ದು. [ನಂ. 21.

ಬೆಂಗಳೂರು, ಗುರುವಾರ, ಮೇ ತಾ|| 23, ಸ್ಯ 1907.

☞ ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮತ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ಕೆ ವ ಇನಾಂ ಸೂಪರ್ಡೆಂಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಲೆಕ್ಟ್ರೋಲರವರು, ಪಬ್ಲಿಕವರ್ಕ್ಸ್ ಆಫಿಸರಗಳು, ಫಾರೆಸ್ಟ್ರು, ರೆಜಿಸ್ಟ್ರೇರ್ಸ ವ ಎಡ್ಯುಕೇರ್ಸ ಇನ್ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೊಲೀಸ್ ಸೂಪರ್ಡೆಂಟೆಂಡೆಂಟರು, ಫಾರೆಸ್ಟ್ರು ಆಫಿಸರಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್ಗಳು ವಗೈರೆ ಕಾಲಸ್ಥತೀ ರಿಪೋರ್ಟುಗಳು; ಪೋಸ್ಟ್ಆಫೀಸ್ ನೋಟಸುಗಳು.

3ನೆ ಭಾಗ—ಲೆಜಿಸ್ಲೇಟಿವ್ ರೆಗ್ಯುಲೇರ್ಷಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು.

4ನೆ ಭಾಗ—ಸರ್ಕಾರೀ ಕಾಗದ ಪತ್ರಗಳು.

I ನೆ ಭಾಗ.

ಮೈಸೂರು ಸೀಮೆಯ ಶ್ರೀಮತ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 8ನೆ ಮೇ 1907.

ನಂ. 10452—ಸ್ಯಾನಿಟರಿ ಎಫ್. 156 ಆಫ್ 1906, ಕೋಲಾರ ಡಿಸ್ಟ್ರಿಕ್ಟು ಬಾಗೇಪಲ್ಲಿ ತಾಲ್ಲೂಕಿನ ದೇವರಗಂಡಿಗಾವಮಕ್ಕೆ ಶ್ರೀ ಗಡಿದಂ ವೆಂಕಟರಮಣಸ್ವಾಮಿ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮತ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮತ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮೇ 27ನೆ ತಾರೀಖಿನಿಂದ 1907ನೆ ಜೂ 2ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್ನಾಮೆಗೆ ವಿರೋಧವಾಗಿ ವೇಲ್ಲಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 6ನೆ ಮೇ 1907.

ನಂ. 10334—ಸ್ಯಾನಿಟರಿ 66-06—47, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವುದೇನಂದರೆ :—ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶಗಳು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇರ್ಷ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9385—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21-96 ಈ ನಂಬರುಗಳ ಇಸ್ತಿಹಾರ್ನಾಮೆಗೆ ಕೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.	ತಾಲ್ಲೂಕು.
ಜೋಡಿ ಲೋಕನಹಳ್ಳಿ	ಹಾಸನ.
ಕಾಟೆಹಳ್ಳಿ	ಡಿಟೋ